**SEPTEMBER 17, 2025**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಪ್ರಧಾನ ಮಂತ್ರಿ ನರೇಂದ್ರ** ಮೋದಿ ಅವರ 75 ನೇ ಜನ್ಮ ದಿನಾಚರಣೆ ಹಿನ್ನೆಲೆ: ಇಂದಿನಿಂದ ಅಕ್ಟೋಬರ್ 2 ವರೆಗೆ 'ಸೇವಾ ಪರ್ವ' ಆಯೋಜನೆ.

- **ಸಾಮುದಾಯಿಕ ಸಹಭಾಗಿತ್ವದಲ್ಲಿ** ಸ್ವಚ್ಛತೆ ಮತ್ತು ನೈರ್ಮಲ್ಯ ಖಾತ್ರಿ ಪಡಿಸಲು ಇಂದಿನಿಂದ ರಾಜ್ಯಾದ್ಯಂತ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನ.

- **ಕೃಷ್ಣಾ ಮೇಲ್ದಂಡೆ ಯೋಜನೆ** ಸಂಬಂಧ ಸರ್ಕಾರದ ತೀರ್ಮಾನ: ಹಲವು ವರ್ಷಗಳ ಹೋರಾಟಕ್ಕೆ ಸಿಕ್ಕ ಫಲ– ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವರು.

- **ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ** ನಡೆದ ಕೃಷಿ ಮೇಳಕ್ಕೆ ನಿನ್ನೆ ತೆರೆ: ನಾಲ್ಕು ದಿನಗಳಲ್ಲಿ ಮೇಳಕ್ಕೆ ಭೇಟಿ ನೀಡಿದ 23 ಲಕ್ಷಕ್ಕೂ ಅಧಿಕ ರೈತರು.

**ಈಗ ವಾರ್ತೆಗಳ ವಿವರ**

*******

**ಪ್ರಧಾನ ಮಂತ್ರಿ ನರೇಂದ್ರ** ಮೋದಿ ಅವರ 75 ನೇ ಜನ್ಮ ದಿನಾಚರಣೆ ಹಿನ್ನೆಲೆ, ಇಂದಿನಿಂದ ಅಕ್ಟೋಬರ್ 2, ಗಾಂಧಿ ಜಯಂತಿವರೆಗೆ ರಾಜ್ಯಾದ್ಯಂತ, ಸೇವಾ ಪರ್ವ' ಆಯೋಜಿಸಲಾಗಿದೆ. ಸೇವಾ ಪರ್ವದ ಭಾಗವಾಗಿ ಹಲವು ವಿಧಾಯಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ಕುರಿತು ಖ್ಯಾತ ಗಝಲ್ ಗಾಯಕ ಅನುಪ ಜಲೋಟಾ ತಮ್ಮ ಅಭಿಪ್ರಾಯ ಹಂಚಿಕೊಂಡಿದ್ದು ಹೀಗೆ..

**ದೇಶ ಕಂಡ ಅತ್ಯಂತ** ಸಭ್ಯ ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು, ಯಾರೇ ಅವರ ಬಗ್ಗೆ ಟೀಕೆ ಮಾಡಿದರೂ, ಅವರು ಯಾರೊಬ್ಬರ ಬಗ್ಗೆಯೂ ಕೆಟ್ಟದಾಗಿ ಮಾತನಾಡಿದ್ದನ್ನು ಕೇಳಿಲ್ಲ. ಅವರೊಬ್ಬ ಸಹೃದಯಿ ಎಂದು ಖ್ಯಾತ ಹಿನ್ನೆಲೆ ಗಾಯಕಿ ಆಶಾ ಭೋಸ್ಲೆ ಪ್ರಧಾನಿ ಅವರನ್ನು ಬಣ್ಣಿಸಿದ್ದಾರೆ.

*******

**ಸಾಮುದಾಯಿಕ ಸಹಭಾಗಿತ್ವದಲ್ಲಿ** ಜನಾಂದೋಲನದ ಮೂಲಕ ಸ್ವಚ್ಛತೆ ಮತ್ತು ನೈರ್ಮಲ್ಯ ಖಾತ್ರಿ ಪಡಿಸಲು ಇಂದಿನಿಂದ ಅಕ್ಟೋಬರ್ 2, ಗಾಂಧಿ ಜಯಂತಿವರೆಗೆ ರಾಜ್ಯಾದ್ಯಂತ, ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನ ಹಮ್ಮಿಕೊಳ್ಳಲಾಗಿದೆ. **ಮಂಡ್ಯ ಜಿಲ್ಲೆಯ** ಎಲ್ಲಾ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ ಜಯಂತಿ ಅಂಗವಾಗಿ ಸ್ವಚ್ಛತಾ ಹೀ ಸೇವಾ ಅಥವಾ ಸ್ವಚ್ಛತೆಯೇ ಸೇವೆ ಎಂಬ ವಿಶೇಷ ಜನಾಂದೋಲನ ಹಮ್ಮಿಕೊಂಡಿದ್ದು, ಕಾರ್ಯಕ್ರಮದ ಅಂಗವಾಗಿ ಅನೈರ್ಮಲ್ಯ ಸ್ಥಳಗಳ ಗುರುತಿಸುವಿಕೆ, ಸಫಾಯಿ ಮಿತ್ರ ಸುರಕ್ಷಾ ಶಿಬಿರಗಳ ಆಯೋಜನೆ, ಸ್ವಚ್ಛ ಹಸಿರು ಉತ್ಸವಗಳ ಆಚರಣೆ, ವಿವಿಧ ಪ್ರಚಾರ ಚಟುವಟಿಕೆಗಳು, ಒಂದು ದಿನ ಒಂದು ಗಂಟೆ ಸಾಮೂಹಿಕ ಸ್ವಚ್ಛತಾ ಶ್ರಮದಾನ ಸೇರಿದಂತೆ ಹಲವು ಚಟುವಟಿಕೆಗಳನ್ನು ಆಯೋಜಿಸಲಾಗುತ್ತಿದೆ ಎಂದು ಜಿಲ್ಲಾ ಪಂಚಾಯ್ತಿ ಸಿಇಓ ಕೆ.ಆರ್.ನಂದಿನಿ ತಿಳಿಸಿದ್ದಾರೆ. **ಈ ಅಭಿಯಾನದ ಮೂಲಕ** ಜನರ ಭಾಗವಹಿಸುವಿಕೆಯೊಂದಿಗೆ, ನೈರ್ಮಲ್ಯ ಸುಧಾರಣೆಗೆ ಪ್ರಾಶಸ್ತ್ಯ, ನಗರ ಮತ್ತು ಗ್ರಾಮೀಣ ಪ್ರದೇಶದಲ್ಲಿ ಸಂಪೂರ್ಣ ನೈರ್ಮಲ್ಯ ಸಾಧಿಸಲು ಉದ್ದೇಶಿಸಲಾಗಿದೆ ಎಂದು ಕಾರವಾರ ಜಿಲ್ಲಾ ಪಂಚಾಯಿತಿ ಸಿಇಓ ಡಾ.ದಿಲೀಪ ಶಶಿ ತಿಳಿಸಿದ್ದಾರೆ. **'ಸ್ವಚ್ಛತೆಯೇ ಸೇವೆ ಪಾಕ್ಷಿಕ'** ಅಭಿಯಾನದ ಅಂಗವಾಗಿ ಬಳ್ಳಾರಿ ಜಿಲ್ಲೆಯ

ಎಲ್ಲಾ ಗ್ರಾಮ ಪಂಚಾಯತಿಗಳಲ್ಲಿ ಸ್ವಚ್ಛತೆ ಮತ್ತು ಶುಚಿತ್ವ ಕುರಿತು ಜನರಲ್ಲಿ ಜಾಗೃತಿ ಮೂಡಿಸಲು ವಿವಿಧ ಕಾರ್ಯಕ್ರಮ ಮತ್ತು ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ತಿಳಿಸಿದ್ದಾರೆ.

*******

**ಕೃ  ್ಣ ಮೇಲ್ದಂಡೆ ಯೋಜನೆ** ಸಂಬಂಧ ಸರ್ಕಾರ ಕೈಗೊಂಡ ತೀರ್ಮಾನ ಹಲವು ವರ್ಷಗಳ ಹೋರಾಟಕ್ಕೆ ಸಿಕ್ಕ ಫಲ ಎಂದು ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವ ಆರ್ ಬಿ ತಿಮ್ಮಾಪೂರ ಸಂತಸ ವ್ಯಕ್ತಪಡಿಸಿದ್ದಾರೆ. ಕೃ  ್ಣ ಮೇಲ್ದಂಡೆ ಯೋಜನೆಯ ಹಿನ್ನೀರಿನಲ್ಲಿ ಮುಳುಗಡೆಯಾಗುವ ನೀರಾವರಿ ಜಮೀನಿಗೆ ಪ್ರತಿ ಎಕರೆಗೆ 40 ಲಕ್ಷ, ಒಣಭೂಮಿಗೆ 30 ಲಕ್ಷ, ಜೊತೆಗೆ ಕಾಲುವೆ ನಿರ್ಮಾಣಕ್ಕೆ ಭೂಮಿ ಕಳೆದುಕೊಳ್ಳುವ ರೈತರ ನೀರಾವರಿ ಜಮೀನಿಗೆ 30 ಲಕ್ಷ, ಒಣ ಭೂಮಿಗೆ 25 ಲಕ್ಷ ನೀಡಲು ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಆಣೆಕಟ್ಟು ಎತ್ತರವನ್ನು 519 ರಿಂದ 524 ಮೀಟರ್ ರವರೆಗೂ ಹೆಚ್ಚಿಸುವುದರಿಂದ 75 ಸಾವಿರಕ್ಕೂ ಹೆಚ್ಚು ಎಕರೆ ಜಮೀನು ಹಿನ್ನೀರಿನಲ್ಲಿ ಮುಳುಗಡೆಯಾಗಲಿದೆ. ಒಂದೇ ಹಂತದಲ್ಲಿ ಖರೀದಿ ಮೂಲಕ ಸ್ವಾಧೀನಕ್ಕೆ ತೀರ್ಮಾನ ಮಾಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

*******

**ಯಾದಗಿರಿ ಜಿಲ್ಲೆಯಲ್ಲಿ** ಅತಿವೃಷ್ಟಿಯಿಂದಾದ ಬೆಳೆ ಹಾನಿಗೆ ಸಂಬಂಧಿಸಿದಂತೆ ಸಮಗ್ರ ವರದಿ ಸಲ್ಲಿಸುವಂತೆ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆ.ಡಿ.ಪಿ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಯಾವೊಬ್ಬ ಅರ್ಹ ರೈತರ ಜಮೀನು ಬಿಟ್ಟು ಹೋಗದಂತೆ, ಸಮೀಕ್ಷೆ ನಡೆಸಿ ವರದಿ ಸಲ್ಲಿಸಬೇಕು. ರೈತರಿಗೆ ಬೀಜ, ರಸಗೊಬ್ಬರದ ಕೊರತೆಯಾಗದಂತೆ, ಡೀಲರ್‌ಗಳಿಂದ ರಸಗೊಬ್ಬರ ಅಕ್ರಮವಾಗಿ ಮಾರಾಟವಾಗದಂತೆ ನಿಗಾವಹಿಸಬೇಕು. ವಿಮೆ ಹಣ ಸಕಾಲಕ್ಕೆ ದೊರೆಯುವಂತೆ ನೋಡಿಕೊಳ್ಳಬೇಕು. ಬಡವರಿಗೆ ಕುರಿ ಸಾಕಾಣಿಕೆ, ಇತರೆ ಸಾಲ, ಸೌಲಭ್ಯ ಆದ್ಯತೆ ಮೇಲೆ ದೊರಕಿಸುವ ಸರ್ಕಾರದ ಉದ್ದೇಶಗಳು ಈಡೇರಿಸುವಂತೆ ಕಾರ್ಯ ನಿರ್ವಹಿಸಬೇಕು ಎಂದು ಸಚಿವರು ಸೂಚನೆ ನೀಡಿದರು.

*******

**ಕಲ್ಯಾಣ ಕರ್ನಾಟಕ ಉತ್ಸವ** ದಿನಾಚರಣೆ ಅಂಗವಾಗಿ ಇಂದು ಬೆಳಿಗ್ಗೆ 9 ಕ್ಕೆ ನಗರದ ಜಿಲ್ಲಾ ಪೊಲೀಸ್ ಪರೇಡ್ ಮೈದಾನದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಷ್ಟ್ರ ಧ್ವಜಾರೋಹಣ ನೆರವೇರಿಸಲಿದ್ದಾರೆ. ಜತೆಗೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಿಲಾನ್ಯಾಸ, ಉದ್ಘಾಟನೆ ಹಾಗೂ ವಿವಿಧ ಇಲಾಖೆಗಳ ಫಲಾನುಭವಿಗಳಿಗೆ ಸವಲತ್ತುಗಳ ವಿತರಣೆ ಮಾಡಲಿದ್ದು, ಮಧ್ಯಾಹ್ನ 12 ಗಂಟೆಗೆ ಕಲಬುರಗಿಯಲ್ಲಿ ರಾಜ್ಯಾದ್ಯಂತ 500 ಕೆ.ಎಂ.ಎಫ್. ನಂದಿನಿ ಮಾರಾಟ ಮಳಿಗೆಗಳನ್ನು ಉದ್ಘಾಟಿಸಲಿದ್ದಾರೆ. ಮಧ್ಯಾಹ್ನ 12.30 ಕ್ಕೆ ಶ್ರೀ ಶರಣಬಸವೇಶ್ವರ ಜಾತ್ರಾ ಮೈದಾನದಲ್ಲಿ ಆಯೋಜಿಸಿರುವ ಬೃಹತ್ ಅಭಿನಂದನಾ ಸಮಾರಂಭದಲ್ಲಿ ಮುಖ್ಯಮಂತ್ರಿ ಭಾಗವಹಿಸಲಿದ್ದಾರೆ.

*******

**ಲಿಂಗತ್ವ ಅಲ್ಪಸಂಖ್ಯಾತರಿಗೂ** ಗೃಹಲಕ್ಷ್ಮಿ ಯೋಜನೆಯ ಸೌಲಭ್ಯ ಕಲ್ಪಿಸಲಾಗಿದೆ ಎಂದು ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಜಿ.ಪದ್ಮಾವತಿ ಹೇಳಿದ್ದಾರೆ. ಬಳ್ಳಾರಿಯಲ್ಲಿ ಜಿಲ್ಲಾ ಮಹಿಳಾ ಅಭಿವೃದ್ಧಿ ನಿಗಮದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಜತೆಗೆ ಲಿಂಗತ್ವ ಅಲ್ಪಸಂಖ್ಯಾತರಿಗೆ ಆಹಾರ ಪಡಿತರ ಚೀಟಿ ವಿತರಿಸಲು ಸರ್ಕಾರದ ಮಟ್ಟದಲ್ಲಿ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗಿದೆ ಎಂದರು.

*******

**ಕಳೆದ ನಾಲ್ಕು ದಿನಗಳಿಂದ ರೈತ ಸಮುದಾಯದ** ಸಂಭ್ರಮಕ್ಕೆ ಕಾರಣವಾಗಿದ್ದ, ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ ನಡೆದ ಕೃಷಿ ಮೇಳ ನಿನ್ನೆ ಸಂಪನ್ನಗೊಂಡಿತು. ನಾಲ್ಕು ದಿನಗಳಲ್ಲಿ ಜಿಲ್ಲೆ, ಹೊರಜಿಲ್ಲೆಗಳಿಂದ 23 ಲಕ್ಷಕ್ಕೂ ಹೆಚ್ಚು ಜನ ಮೇಳಕ್ಕೆ ಭೇಟಿ ನೀಡಿದ್ದು, ರೈತರು ಹೊಸ ಸಂಶೋಧನೆ, ಆವಿಷ್ಕಾರಗಳ ಕುರಿತು, ಉತ್ತಮ ತಳಿ ಬೀಜಗಳು, ಕೃಷಿ ಉಪಕರಣಗಳು, ಸಾಂಪ್ರಾದಾಯಿಕ, ಸಾವಯವ ಕೃಷಿ, ಸಿರಿಧಾನ್ಯಗಳ ಮಹತ್ವ ಸೇರಿದಂತೆ ಕೃಷಿಗೆ ಪೂರಕವಾದ ಹಲವು ವಿಷಯಗಳ ಕುರಿತು ಮಾಹಿತಿ ಪಡೆದರು. ಕೃಷಿ ಮೇಳದಲ್ಲಿ ವಿಶ್ವವಿದ್ಯಾಲಯದ ಬೀಜ ಘಟಕದಲ್ಲಿನ ಸುಮಾರು 757 ಕ್ವಿಂಟಲ್ ಬಿತ್ತನೆ ಬೀಜ ಮಾರಾಟವಾಗಿದ್ದು, ಈ ಕುರಿತು ಬೀಜ ಘಟಕದ ವಿಶೇ  ಾಧಿಕಾರಿ ಪ್ರೊ.ಶಶಿಧರ ಟಿ.ಆರ್., ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ.

*******

**ರಭಸವಾಗಿ ಹರಿಯುತ್ತಿದ್ದ ಹಳ್ಳ ದಾಟುತ್ತಿದ್ದ** ವೇಳೆ ಆರೋಗ್ಯ ಇಲಾಖೆ ಮಹಿಳಾ ಸಿಬ್ಬಂದಿಯೊಬ್ಬರು ಹಳ್ಳದಲ್ಲಿ ಕೊಚ್ಚಿಹೋದ ಘಟನೆ ಗದಗ ಜಿಲ್ಲೆ ರೋಣ ತಾಲೂಕಿನ ಯಾ.ಸ. ಹಡಗಲಿ ಗ್ರಾಮದ ಬಳಿ ನಿನ್ನೆ ಸಂಜೆ ನಡೆದಿದೆ. ಮಂಗಳವಾರ ಮಧ್ಯಾಹ್ನ ಸುರಿದ ಧಾರಾಕಾರ ಮಳೆಗೆ ಹಳ್ಳ ರಭಸವಾಗಿ

ಹರಿಯುತ್ತಿದ್ದು, ಈ ವೇಳೆ ಯಾ.ಸ ಹಡಗಲಿ ಗ್ರಾಮದಿಂದ ಕೌಜಗೇರಿಗೆ ಬೈಕ್‌ನಲ್ಲಿ ತೆರಳುತ್ತಿದ್ದ ಆರೋಗ್ಯ ಇಲಾಖೆ ಸಿಬ್ಬಂದಿ ಹಳ್ಳ ದಾಟುವಾಗ ಆಯ ತಪ್ಪಿ ಕೆಳಗೆ ಬಿದ್ದಿದ್ದು, ನೀರಿನ ರಭಸಕ್ಕೆ ಆರೋಗ್ಯ ಕಿರಿಯ ಸಹಾಯಕ ಅಧಿಕಾರಿ ಬಸಮ್ಮ ಗುರಿಕಾರ ಕೊಚ್ಚಿ ಹೋಗಿದ್ದಾರೆ. ಶೋಧ ಕಾರ್ಯ ಮುಂದುವರಿದಿದೆ. ಉಳಿದಂತೆ ಸಮುದಾಯ ಆರೋಗ್ಯ ಅಧಿಕಾರಿ ಬಸವರಾಜ ಕಡಪಟ್ಟಿ ಆರೋಗ್ಯ ನಿರೀಕ್ಷಣ ಅಧಿಕಾರಿ ವೀರಸಂಗಯ್ಯ ಹಿರೇಮಠ ಅವರನ್ನು ರಕ್ಷಣೆ ಮಾಡಲಾಗಿದೆ. ಗದಗ ಜಿಲ್ಲೆ ರೋಣ ತಾಲೂಕಿನ ಕೌಜಗೇರಿ ಆಯು ್ಮಾನ್ ಆರೋಗ್ಯ ಮಂದಿರ ಉಪ ಕೇಂದ್ರದಿಂದ ಯಾ.ಸ. ಹಡಗಲಿ ಗ್ರಾಮದಲ್ಲಿ ಜರುಗಿದ ಆರೋಗ್ಯ ಶಿಬಿರ ಮುಗಿಸಿಕೊಂಡು ವಾಪಸಾಗುತ್ತಿದ್ದ ವೇಳೆ ದುರ್ಘಟನೆ ಸಂಭವಿಸಿದೆ.

*******

**ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು** ಸಚಿವ ಎಚ್.ಡಿ.ಕುಮಾರಸ್ವಾಮಿ ದೆಹಲಿಯಲ್ಲಿ ನಿನ್ನೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮಮೋಹನ ನಾಯ್ಡು ಕಿಂಜರಾಪು ಅವರನ್ನು ಭೇಟಿ ಮಾಡಿ ಸಮಾಲೋಚನೆ ನಡೆಸಿದರು. ಮೈಸೂರು ದಸರಾ ಸಂದರ್ಭದಲ್ಲಿ, ಕೆ.ಆರ್.ಎಸ್.ನ ಹಿನ್ನೀರಿನಲ್ಲಿ ನೀರಿನ ಮೇಲೆ ಇಳಿಯುವ ವಿಮಾನಯಾನ ಸೇವೆಗೆ ಅವಕಾಶ ಮಾಡಿಕೊಡುವಂತೆ ಮನವಿ ಸಲ್ಲಿಸಲಾಗಿದ್ದು, ಇದರಿಂದ ಪ್ರವಾಸೋದ್ಯಮಕ್ಕೆ ಮತ್ತ ್ಟ ಉತ್ತೇಜನ ದೊರೆಯಲಿದೆ ಎಂದು ತಿಳಿಸಿದ್ದಾರೆ.

*******

**ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು**

**ಪ್ರಧಾನ ಮಂತ್ರಿ ನರೇಂದ್ರ** ಮೋದಿ ಅವರ 75 ನೇ ಜನ್ಮ ದಿನಾಚರಣೆ ಹಿನ್ನೆಲೆ: ಇಂದಿನಿಂದ ಅಕ್ಟೋಬರ್ 2 ವರೆಗೆ 'ಸೇವಾ ಪರ್ವ' ಆಯೋಜನೆ.

**ಸಾಮುದಾಯಿಕ ಸಹಭಾಗಿತ್ವದಲ್ಲಿ** ಸ್ವಚ್ಛತೆ ಮತ್ತು ನೈರ್ಮಲ್ಯ ಖಾತ್ರಿ ಪಡಿಸಲು ಇಂದಿನಿಂದ ರಾಜ್ಯಾದ್ಯಂತ ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನ.

**ಕೃ ್ಣ ಮೇಲ್ದಂಡೆ ಯೋಜನೆ** ಸಂಬಂಧ ಸರ್ಕಾರದ ತೀರ್ಮಾನ: ಹಲವು ವರ್ಷಗಳ ಹೋರಾಟಕ್ಕೆ ಸಿಕ್ಕ ಫಲ– ಬಾಗಲಕೋಟೆ ಜಿಲ್ಲಾ ಉಸ್ತುವಾರಿ ಸಚಿವರು.

**ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿ** ನಡೆದ ಕೃಷಿ ಮೇಳಕ್ಕೆ ನಿನ್ನೆ ತೆರೆ: ನಾಲ್ಕು ದಿನಗಳಲ್ಲಿ ಮೇಳಕ್ಕೆ ಭೇಟಿ ನೀಡಿದ 23 ಲಕ್ಷಕ್ಕೂ ಅಧಿಕ ರೈತರು.

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು**

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ**

******END******